ಉತ್ತರಿಸುವ ಸಚಿವರು: ಶ್ರೀ ಮಲ್ಲಿಕಾರ್ಜುನ ನಾಗಪ್ಪ(ಪೌರಾಡಳಿತ ರಾಜ್ಯ ಸಚಿವರು)

ಪ್ರಶ್ನೆ

1) ಶಿವಮೊಗ್ಗ ನಗರದಲ್ಲಿ ಅನೇಕ ವರ್ಷಗಳಿಂದ ನಗರಸಭೆ ಜಾಗದಲ್ಲಿ ಅನಧಿಕೃತ ಮನೆ ಕಟ್ಟಿಕೊಂಡಿರುವ ಬಡವರ ಮನೆಗಳನ್ನು ಸಕ್ರಮಗೊಳಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)

ಅ) ಶಿವಮೊಗ್ಗ ನಗರಸಭೆಗೆ ಸಂಬಂಧಿಸಿದಂತೆ ನಗರಸಭೆ ಜಾಗದಲ್ಲಿರುವ ಅನಧಿಕೃತ ವಾಣಿಜ್ಯ ಕಟ್ಟಡಗಳನ್ನು ಸಕ್ರಮಗೊಳಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ? (ವಿವರ ನೀಡುವುದು)

ಇ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು?

ಉತ್ತರ

ಅ) ಹೌದು.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಶಿವಮೊಗ್ಗದಲ್ಲಿ ಖಾಸಗಿ ರೆವಿನ್ಯೂ ಜಾಗದಲ್ಲಿ ನಿರ್ಮಿಸಿರುವ ಮನೆಗಳ ಸಕ್ರಮ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 95(311)

ಸದಸ್ಯರ ಹೆಸರು: ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ)

ಉತ್ತರಿಸುವ ಸಚಿವರು: ಶ್ರೀ ಎಂ.ಮಲ್ಲಿಕಾರ್ಜುನ ನಾಗಪ್ಪ(ಪೌರಾಡಳಿತ ರಾಜ್ಯ ಸಚಿವರು)

ಪ್ರಶ್ನೆ

ಅ) ಖಾಸಗಿ ರೆವಿನ್ಯೂ ಜಾಗದಲ್ಲಿ ನಿರ್ಮಿಸಿಕೊಂಡಿರುವ ಮನೆಗಳನ್ನು ಸಕ್ರಮಗೊಳಿಸಲು ನಿಗದಿಪಡಿಸಿದ ಅವಧಿ ಮುಗಿದಿರುವುದು ನಿಜವೇ?

ಆ) ನಿವಾಗಿದ್ದಲ್ಲಿ, ಈ ಕಾಲಾವಧಿಯನ್ನು ಸರ್ಕಾರ ಪುನಃ ವಿಸ್ತರಿಸುವುದೇ?

ಉತ್ತರ

ಅ) ಹೌದು

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಶಿವಮೊಗ್ಗ ನಗರ ಒಳಚರಂಡಿ ವ್ಯವಸ್ಥೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 96(316)

ಸದಸ್ಯರ ಹೆಸರು: ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ)

ಉತ್ತರಿಸುವ ಸಚಿವರು: ಶ್ರೀ ಎಸ್.ಎಂ.ಕೃಷ್ಣ(ಮುಖ್ಯ ಮಂತ್ರಿಯವರು)

ಪ್ರಶ್ನೆ

ಅ) ಶಿವಮೊಗ್ಗ ನಗರದಲ್ಲಿ ಒಳಚರಂಡಿ ವ್ಯವಸ್ಥೆಯು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಒಳಚರಂಡಿ ವ್ಯವಸ್ಥೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಉತ್ತರ

ಅ) ಶಿವಮೊಗ್ಗ ನಗರದ ಹಳೇ ಪ್ರದೇಶಗಳಿಗೆ ಒಳಚರಂಡಿ ವ್ಯವಸ್ಥೆಯನ್ನು ಈಗಾಗಲೇ ಒದಗಿಸಲಾಗಿದೆ. ಹೊಸ ಬಡಾವಣೆಗಳಿಗೆ ಒಳಚರಂಡಿ ವ್ಯವಸ್ಥೆಯನ್ನು ಒದಗಿಸಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಶಿವಮೊಗ್ಗ ನಗರಕ್ಕೆ ವ್ಯವಸ್ಥಿತವಾದ ಒಳಚರಂಡಿ ಯೋಜನೆಯ ಸರ್ವೆ ಕಾರ್ಯಕ್ಕಾಗಿ ನಗರ ಸಭೆಯವರು ರೂ.4.45 ಲಕ್ಷಗಳನ್ನು ಮಂಡಲಿಗೆ ತುಂಬ ಬೇಕಾಗಿರುತ್ತದೆ. ಆದಾಗ್ಯೂ ಸಹ ಶಿವಮೊಗ್ಗ ನಗರಾಭಿವೃದ್ಧಿ ಪ್ರಾಧಿಕಾರದ ಬಡಾವಣೆಗಳಿಗೂ ಒಳಚರಂಡಿ ವ್ಯವಸ್ಥೆಯನ್ನು ಒದಗಿಸುವ ಸಲುವಾಗಿ ವಿವರವಾದ ಅಂದಾಜು ತಯಾರಿಸಲು ಕಿರ್ಲೋಸ್ಕರ್ ಕನ್ಸ್ಲ್ಟೆಂಟ್ ಸಂಸ್ಥೆಗೆ ವಹಿಸಲಾಗಿದ್ದು, ಕಾರ್ಯ ಸಾಧ್ಯತಾ ವರದಿಯನ್ನು ರೂ.40 ಕೋಟಿಗಳಿಗೆ ಸಲ್ಲಿಸಿರುತ್ತಾರೆ. ತಾಂತ್ರಿಕ ಪರಿಶೀಲನೆ ನಂತರ ಹಾಗೂ ಪುರಸಭೆಯವರು ರೂ.4.45 ಲಕ್ಷಗಳನ್ನು ಮಂಡಲಿಗೆ